# ಮೈಸೂರು ವಿಶ್ವವಿದ್ಯಾನಿಲಯ

ಸ್ಥಾಪನೆ 1916

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು-570 005,

ಸಂಖ್ಯೆ: ಜಿಎಲ್5/234(1)/2019-20

ದಿನಾಂಕ 04.05.2020

## ಸುತ್ತೋಲೆ

ವಿಷಯ: ದೇಶಾದ್ಯಂತ ಹರಡುತ್ತಿರುವ ಕೋವಿಡ್-19 ವೈರಾಣುವಿನ ಹರಡುವಿಕೆಯನ್ನು ತಡೆಗಟ್ಟುವ ಹಿನ್ನೆಲೆಯಲ್ಲಿ ರಜೆಯನ್ನು ಮುಂದುವರೆಸುವ ಕುರಿತು.

ಉಲ್ಲೇಖ: 1) ವಿ.ವಿ. ಸುತ್ತೋಲೆ ಸಂಖ್ಯೆ: ಜಿಎಲ್5/234(1)/2019-20 ದಿನಾಂಕ 23.03.2020.
2) ವಿ.ವಿ. ಸುತ್ತೋಲೆ ಸಂಖ್ಯೆ: ಜಿಎಲ್5/234(1)/2019-20 ದಿನಾಂಕ 30.03.2020.
3) ವಿ.ವಿ. ಸುತ್ತೋಲೆ ಸಂಖ್ಯೆ: ಜಿಎಲ್5/234(1)/2019-20 ದಿನಾಂಕ 15.04.2020.
4) ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ 123 ಡಿಬಿಎಂ2020(ಭಾಗ) ದಿ:18.04.2020
5) ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ 123 ಡಿಬಿಎಂ2020(ಭಾಗ) ದಿ:02.05.2020

* * *

ವಿಶ್ವವಿದ್ಯಾನಿಲಯದ ಉಲ್ಲೇಖಿತ ಸುತ್ತೋಲೆಗಳ ಮುಂದುವರಿಕೆಯಾಗಿ, ದೇಶಾದ್ಯಂತ ಹರಡುತ್ತಿರುವ ಕೋವಿಡ್-19 ವೈರಾಣುವಿನ ಹರಡುವಿಕೆಯನ್ನು ತಡೆಗಟ್ಟುವ ಸಲುವಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರವು ಮೂರನೇ ಹಂತದಲ್ಲಿ ಲಾಕ್‌ಡೌನ್ ಅವಧಿಯನ್ನು ದಿನಾಂಕ: 17.05.2020ರವರೆಗೆ ವಿಸ್ತರಿಸಿ ಮತ್ತು ಮೈಸೂರು ನಗರವನ್ನು ಕೆಂಪು ವಲಯವನ್ನಾಗಿ ಗುರುತಿಸಿರುವುದರಿಂದ ಕರ್ನಾಟಕ ರಾಜ್ಯ ಸರ್ಕಾರವು ಹೊರಡಿಸಿರುವ ಮಾರ್ಗಸೂಚಿಗಳಿಗೆ ಅನುಗುಣವಾಗಿ **ದಿನಾಂಕ 17.05.2020ರವರೆಗೆ** ವಿಶ್ವವಿದ್ಯಾನಿಲಯದ ಎಲ್ಲಾ ವಿದ್ಯಾರ್ಥಿಗಳಿಗೆ ರಜೆಯನ್ನು ಮುಂದುವರಿಸಲಾಗಿದೆ ಮತ್ತು ಈ ನಿಟ್ಟಿನಲ್ಲಿ ಕಛೇರಿ ಕೆಲಸಕಾರ್ಯಗಳಿಗೆ ಧಕ್ಕೆಯಾಗದಂತೆ ಈ ಕೆಳಕಂಡಂತೆ ಕ್ರಮವಹಿಸಲು ಸೂಚಿಸಲಾಗಿದೆ.

1. ಗ್ರೂಪ್-ಎ ಮತ್ತು ಗ್ರೂಪ್-ಬಿ ವೃಂದದ ಅಧಿಕಾರಿಗಳು ಶೇ.100% (ವಿಶ್ವವಿದ್ಯಾನಿಲಯದ ಅಧೀಕ್ಷಕರುಗಳವರೆಗಿನ ಎಲ್ಲಾ ಅಧಿಕಾರಿಗಳು) ಮತ್ತು ಗ್ರೂಪ್ ಸಿ ಮತ್ತು ಡಿ ವರ್ಗದ ನೌಕರರುಗಳು ಮೇಲಾಧಿಕಾರಿಗಳು ದೂರವಾಣಿ ಮೂಲಕ ತಿಳಿಸಿದಾಗ ತಪ್ಪದೇ ಕಛೇರಿಗೆ ಹಾಜರಾಗಿ ಕೆಲಸಗಳನ್ನು ನಿರ್ವಹಿಸುವುದು.

2. ಎಲ್ಲಾ ಉದ್ಯೋಗಿಗಳು ಕೇಂದ್ರ ಸ್ಥಾನದಲ್ಲಿದ್ದು, ತುರ್ತು ಸಂದರ್ಭದಲ್ಲಿ ಅಧಿಕಾರಿಗಳು ದೂರವಾಣಿ ಮುಖಾಂತರ ಸಂಪರ್ಕಿಸಿದಾಗ, ತಪ್ಪದೇ ಕಛೇರಿಗೆ ಹಾಜರಾಗಿ ಕಛೇರಿಕಾರ್ಯ ನಿರ್ವಹಿಸುವುದು ಹಾಗೂ ಈ ರಜೆಯು ಅಗತ್ಯ ಸೇವೆಯ ಸಿಬ್ಬಂದಿಗಳಾದ ಆರೋಗ್ಯಕೇಂದ್ರದ ಸಿಬ್ಬಂದಿಗಳಿಗೆ ಅನ್ವಯಿಸುವುದಿಲ್ಲ. ಇವರುಗಳು ಎಂದಿನಂತೆ ಕಾರ್ಯನಿರ್ವಹಿಸುವುದು.

3. ಕೋವಿಡ್-19 ಸಾಂಕ್ರಾಮಿಕ ರೋಗ ಹರಡದಿರುವಂತೆ ರಾಜ್ಯ ಸರ್ಕಾರವು ಕಾಲಕಾಲಕ್ಕೆ ಹೊರಡಿಸುವ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸುವುದರೊಂದಿಗೆ ಕಾರ್ಯನಿರ್ವಹಿಸುವಾಗ ಮಾಸ್ಕ್

ಹು.ಕಿ.ಸ್ಥ

ಧರಿಸುವಿಕೆ, ಸ್ಯಾನಿಟೈಸರ್ ಬಳಸುವುದು ಹಾಗೂ ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳುವುದು ಕಡ್ಡಾಯವಾಗಿರುತ್ತದೆ.

4. ಎಲ್ಲಾ ಅಧ್ಯಯನ ವಿಭಾಗಗಳ ಅಧ್ಯಕ್ಷರುಗಳು ಕಡ್ಡಾಯವಾಗಿ ಕಛೇರಿ ಕೆಲಸಗಳಲ್ಲಿ ತೊಡಗಿಸಿಕೊಳ್ಳುವುದು. ಪರೀಕ್ಷಾ ಮಂಡಳಿಗಳ ಅಧ್ಯಕ್ಷರು ಮತ್ತು ಸದಸ್ಯರುಗಳು ಪರೀಕ್ಷಾ ಕಾರ್ಯ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವುದು ಮತ್ತು ಅಧ್ಯಾಪಕರುಗಳು ಆನ್‌ಲೈನ್ ತರಗತಿಗಳನ್ನು ಎಂದಿನಂತೆ ತೆಗೆದುಕೊಳ್ಳಲು ಸೂಚಿಸಲಾಗಿದೆ.

ಇನ್ನುಳಿದಂತೆ ಮೇಲಿನ ಉಲ್ಲೇಖ(1)ರ ಸುತ್ತೋಲೆಯಲ್ಲಿನ ಅಂಶಗಳು ಯಥಾವತ್ತಾಗಿರುತ್ತದೆ.

4/5/2020

ಕುಲಸಚಿವರು
ಮೈಸೂರು ವಿಶ್ವವಿದ್ಯಾನಿಲಯ
ಮೈಸೂರು

04-5-2020

ಇವರಿಗೆ:

1. ಅಧ್ಯಕ್ಷರು/ನಿರ್ದೇಶಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗ/ಸಂಸ್ಥೆಗಳು, ಮಾನಸ ಗಂಗೋತ್ರಿ, ಮೈಸೂರು.
2. ಎಲ್ಲಾ ಅಂಗ ಸಂಸ್ಥೆಗಳ ನಿರ್ದೇಶಕರು/ಸಂಯೋಜನಾಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
3. ನಿರ್ದೇಶಕರು, ಸ್ನಾತಕೋತ್ತರ ಕೇಂದ್ರ, ಹಾಸನ/ಮಂಡ್ಯ ಮತ್ತು ಚಾಮರಾಜನಗರ.
4. ಎಲ್ಲಾ ಬಟವಾಡೆ ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ಪ್ರಾಂಶುಪಾಲರು, ಮಹಾರಾಜ/ಯುವರಾಜ/ವಿ.ವಿ. ಸಂಜೆ ಕಾಲೇಜು/ಲಲಿತ ಕಲಾ ಕಾಲೇಜು, ಮೈವಿ.ವಿ., ಮೈಸೂರು.
6. ನಿರ್ದೇಶಕರು, ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಜ್ಞಾನ ವಿಭಾಗ, ಮೈವಿ.ವಿ., ಮೈಸೂರು.
7. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಮಂಡಳಿ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
8. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿನ ಅಧೀನಕ್ಕೊಳಪಡುವ ಎಲ್ಲಾ ಕಾಲೇಜುಗಳು.
9. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
10. ಕುಲಸಚಿವ (ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
11. ಮಾನ್ಯ ಕುಲಪತಿಗಳ ವಿಶೇಷಾಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
12. ಮಾನ್ಯ ಕುಲಪತಿ/ಕುಲಸಚಿವ/ಕುಲಸಚಿವ (ಪರೀಕ್ಷಾಂಗ)/ಹಣಕಾಸು ಅಧಿಕಾರಿಯವರುಗಳ ಆಪ್ತ ಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
13. ಕಛೇರಿ ಪ್ರತಿ.